# ಪ್ರಾಣೇಶದಾಸರು

ನಮೋ ನಮೋ ಶ್ರೀ ಭೀಮ । ನಮೋ ನಮೋ ಜಿತಕಾಮ ।
ಕಮಲಾಕ್ಷ ದಾಸ । ಪೊರೆಯಬ್ಬಾಪ್ತ ಭಾಸ ॥ ಪ ॥

ಘನ ಗಿರಿಯೊಳಗೆ ಕುಂತಿ ನಿನ್ನೆತ್ತಿಕೊಂಡಿರಲು ।
ಧ್ವನಿ ಮಾಡೆ ಹುಲಿ ತಾಯಿ ನಡುಗಿ ಬಿಸುಟೀ ॥
ತನುವು ನಿನ್ನದು ಸೋಂಕೆ ನಗವೊಡೆದು ಶತಶೃಂಗ– ।
ವೆನಿಸಿಕೊಂಡಿತೋ ದ್ವಾಪರದಿ ಬಲವಂತ ॥ 1 ॥

ಲೋಕದೊಳು ಮನುಜರಾ ಶಿಶುಗಳಂದದಿ ಬೆಳೆದು ।
ಪಾಕಶಾಸನಿ ಯಮಜ ಯಮಳರ ಜನನೀ ।
ಯಾ ಕೂಡಿಕೊಂಡು ಇಭಪುರಿಗೈದಿ ಮೋದದಲಿ ।
ಸಾಕಿಕೊಂಡೆಯಂಬಿಕೆಯ ಮಗನಿಂದಾ ॥ 2 ॥

ಚಿಕ್ಕವರೊಡನೆ ಚಂಡು ಬುಗುರಿ ಈಸಿರೆ ಓಟ ।
ತೆಕ್ಕೆ ಮುಷ್ಟಿ ಮರಗಳನೇರುವಲ್ಲಿ ॥
ಸೊಕ್ಕಿದವನಿವನೆಂದು ಆವಾಗಲೆಲ್ಲರಿಗೆ ।
ಬಿಕ್ಕಿ ಬಾಯ್ದೆರೆವಂತೆ ಮಾಡಿ ತೋರಿಸಿದೆ ॥ 3 ॥

ಅಹಿತರಾದವರು ನೀರೊಳಗೆ ಕೆಡಹಲು ಎದ್ದೆ ।
ಅಹಿಗಳಿಂ ಕಟ್ಟಿಸಲು ನೋಯದಿದ್ದೆ ॥
ಸಹಿಸದಲೇ ವಿಷಹಾಕಿ ಬದುಕಲ್ಕೆ ಹೊರಘಾಕೆ ।
ಮಹಮೋಸ ಮಾಡೆ ಗೆದ್ದು ಧರಿಯೊಳು ಮೆರೆದೆ ॥ 4 ॥

ಸೋಕಿಯಸುರಿಯ ಮಗನ ಪಡೆದು ಖಲನನು ತರಿದು ।
ಏಕಚಕ್ರ ನಗರದಲ್ಲಿದ್ದು ।
ಬೇಕೆಂದು ನೀನಾಗಿ ಪೋಗಿ ಬಕನನು ಕೊಂದೆ ।
ಈ ಕುಂಭಿಣೀಯೊಳು ನಿನಗಿದಿರಾರು ದೇವಾ ॥ 5 ॥

ಪಾಂಚಾಲಿಯನು ಗಳಿಸೆ ಕೋಪದಿಂ ಬಂದ ಹರಿ ।
ವಂಚಕರ ದರ್ಪವ ಭಂಗಿಸಿ ಲೀಲೆಯಿಂ ।
ಮಿಂಚುವಾ ಗದೆಲಿಹ ನಿಶ್ಚಿಂತ ಬಲವಂತ ।
ಮುಂಚಿನಜ ಪ್ರಣತ ಸುರಭೂಜ ರವಿತೇಜ ॥ 6 ॥

ಈ ಪರಿಯಿಂದ ಕೆಲಕಾಲವಲ್ಲೆಲ್ಲ ।
ಕಾಪಾಡಿ ವಜ್ರಿಪ್ರಸ್ಥಕ್ಕೈ ತಂದು ॥
ಪಾಪಿ ಜರಿಜನ ಕೊಂದು ರಾಜಸೂಯವ ಮಾಡಿ ।
ನೀಂ ಪಾಲಿಸಿದೆಯವನಿ ಸದ್ಧರ್ಮದಿಂದ ॥ 7 ॥

ದ್ಯೂತವಾಡಿದ ಸಮಯದಲ್ಲಿ ದ್ರೌಪದಿಯಳನು ।
ಪಾತಕಿ ವಸವೆಳೆಯೆ ಕೋಪದಿಂದ ॥
ಘಾತಿಸುವೆನೆಂದಬ್ಬರಿಸಿ ಪಲ್ಗಡಿದು ಲಕ್ಷ್ಮೀ ।
ನಾಥನಿಚ್ಛೆಂಗೆ ಈಗೇಂದು ಕೈಮರೆದೇ ॥ 8 ॥

ತಮೋ ಯೋಗ್ಯನಾ ಪಾಪಪೂರ್ಣದಾಹದಕೆ ಬ– ।
ಹು ಮಿತಿಯಿಂದ ವನವಾಸ ಪತ್ಕರಿಸಿದೆ ॥
ಸಮರಾಂಗಣದೊಳಿವರ ಹೀಗೆ ಸವರುವೆನೆಂದು ।
ಸುಮನಸಾರಾಧ್ಯ ಬಾಹುಗಳೆತ್ತಿ ನಡೆದೆ ॥ 9 ॥

ಕಾನನದಿ ಕಿರ್ಮೀರನಂ ಕೊಂದು ಋಷಿಯಿಂದ ।
ಮಾನವಂ ಕೈಕೊಂಡು ಮತ್ತೆ ಮುಂದೆ ॥
ಆ ನಗದಿ ಬಹುಕಾಲ ಸೇರಿಕೊಂಡಿದ್ದಂಥ ।
ದಾನವರ ಮಡುಹಿ ಸೌಗಂಧಿಕವ ತಂದೆ ॥ 10 ॥

ನಿನ್ನೊಳಗೆ ನೀಂ ಲೀಲೆ ಮಾಡಿದ್ಯಾ ಸಮಯದಲಿ ।
ಚಿನ್ನದೋಪಮ ಪುಷ್ಪವೊಂದು ಬೀಳೆ ॥
ನಿನ್ನರಸಿಯಿದು ಎನಗೆ ಇಷ್ಟವೆನಲವಳ ನುಡಿ ।
ಮನ್ನಿಸುತೆ ಪೋಗಿ ಮಣಿಮಂತನೊಂಚಿಸಿದೆ ॥ 11 ॥

ದ್ವೈತ ವನದೊಳು ಬಂದು ಮೃಗ ಬೇಟೆಯಾಡೆ ಪುರು ।
ಹೂತ ಪದವಾಳ್ದವನು ಮೆಯ್ಯ ಸುತ್ತಲ್ ॥
ನೀ ತವಕ ಬೀಳದೆ ಅವನ ಪುನೀತನ ಮಾಡಿ ।
ಖ್ಯಾತಿ ತಂದಿತ್ತೆಯಂತಕನ ಸುತಗಂದು ॥ 12 ॥

ಮತ್ಸ್ಯ ದೇಶಾಧಿಪನ ಮನೆಯಲ್ಲಿ ಇದ್ದಾಗ ।
ಹೆಚ್ಚಿನಾ ಬಲದ ಮಲ್ಲನ ಕೆಡಹಿದೆ ॥
ಅಚ್ಚ ಪಾಪಾತ್ಮ ಕೀಚಕನನ್ವಯ ತಂದೆ ।
ಅಚ್ಯುತನ ನಿಜದಾಸ ಭಕ್ತರಘನಾಶ ॥ 13 ॥

ಎಂಟೈದು ವರುಷ ಈ ರೀತಿಯಲಿ ಕಳೆದು ವೈ- ।
ಕುಂಠಪತಿ ದಯದಿಂದ ಉಪಪ್ಲಾವ್ಯದಿ ॥
ಗಂಟು ಹಾಕಿದಿ ದುರಾತ್ಮನ ಕೂಡ ಸಂಗರಕೆ ।
ಕಂಠೀರವರವದಿಂ ತಲೆದೂಗಿ ನಡೆದೆ ॥ 14 ॥

ಮುತ್ತೆ ಭೀಷ್ಮಗೆ ವಂದು ಸ್ವಲ್ಪಮಾತ್ರಕೆ ಮಾನ ।
ವಿತ್ತಂತೆ ತೋರಿ ಎಲ್ಲರ ರಥವನೂ ।
ಕತ್ತರಿಸಿ ಹಿಂದಕ್ಕೋಡಿಸಿದೆ ನಿನ್ನಾರ್ಭಟಕೆ ।
ಹತ್ತು ದಿಕ್ಕಿನೊಳೊಬ್ಬರಿದಿರಾಗಲಿಲ್ಲ ॥ 15 ॥

ಪ್ರಹ್ಲಾದನವತಾರ ಬಾಹ್ಲೀಕನನು ಗೆದ್ದು ।
ಮಹೀಜಸುತನಾನಿ ಮಸ್ತಕ ಶೀಳಿದೆ ॥
ಬಹು ಖೋಡಿ ಧಾರ್ತರಾಷ್ಟ್ರರ ಕೊಂದು ಹರೆಬಿಟ್ಟ ।
ಅಹಿಯಂತೆ ರಣರಂಗದಲ್ಲಿ ಸಂಚರಿಸಿದ ॥ 16 ॥

ಕಡು ಕೋಪದಿಂದ ಹೂಂಕರಿಸಿಯುರಿಯುಗುಳುತಲಿ ।
ಪೊಡವಿ ನಡುಗಿಸಿ ನಭ ಬೇಯಿಸುತ್ತಲಿ ॥
ಪಿಡಿದು ದುಶ್ಶಾಸನನ ತೊಡೆಯಲ್ಲಿ ನೆರೆಗೆಡಹಿ ।
ಒಡಲ ಛೇದಿಸಿ ರಕ್ತಮಜ್ಜನವಗೈದೆ ॥ 17 ॥

ಕರುಳ ದಂಡೆಯ ಮಾಡಿ ಅರಸಿ ಮಂಡೆಗೆ ಮುಡಿಸಿ ।
ಖರೆಯ ಮಾಡಿದೆ ಉಭಯತರ ಶಪಥವ ॥
ಕರೆದೆ ಕುರು ಪಾಂಡವರ ಬಿಡಿಸ ಬನ್ನೀರೆಂದು ।
ಮರುಳಗೊಂಡರೆಲ್ಲ ನಿನ್ನ ರೂಪ ನೋಡುತಲಿ ॥ 18 ॥

ಸ್ವಾಮಿ ಪ್ರಾಣೇಶ ವಿಠಲನ ಆಜ್ಞೆಯ ವಹಿಸಿ ।
ಭೂಮಿ ಭಾರಿಳುಹುದಕೆ ಅವತರಿಸಿದೆ ॥
ನಾ ಮಾಡುವೆನೆ ಪೂರ್ತಿ ನಿನ್ನ ಮಹಿಮೆಯ ಸಮರ ।
ಭೀಮ ಕರ ಪಿಡಿದು ಸಲಹುವದೋ ಪ್ರತಿದಿನದಿ ॥ 19 ॥

॥ ಹರೇ ಶ್ರೀನಿವಾಸ ॥

ಸಂಗ್ರಹ: ಧೀರೇಂದ್ರ ಏರೀ